ಅ) ರಾಜ್ಯದಲ್ಲಿ ಲೋಕೋಪಯೋಗಿ ಇಲಾಖೆ ರಸ್ತೆಗಳನ್ನು ಒತ್ತುವರಿ ಮಾಡಿ ಹಾಗೂ ರಸ್ತೆಯ ಇಕ್ಕೆಲಗಳಲ್ಲಿ ಗೊಬ್ಬರ ಹಾಕಿ, ಕಂದಕಗಳನ್ನು ತೋಡಿ ರಸ್ತೆಯ ಓಡಾಟಕ್ಕೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಹಾಗಿದ್ದಲ್ಲಿ ಸರಿಪಡಿಸಲು ಕೈಗೊಂಡ ಕ್ರಮಗಳೇನು?

ಆ) ರಾಜ್ಯದಲ್ಲಿನ ಜಿಲ್ಲಾ ಪಂಚಾಯ್ತಿ ರಸ್ತೆಗಳನ್ನು ಲೋಕೋಪಯೋಗಿ ರಸ್ತೆಗಳಾಗಿ ಪರಿವರ್ತಿಸಲು ಕ್ರಮ ಕೈಗೊಳ್ಳಲಾಗಿದೆಯೇ? ಹಾಗಿದ್ದಲ್ಲಿ ಪ್ರತಿ ಕ್ಷೇತ್ರಗಳಲ್ಲಿ ಎಷ್ಟು ಕಿ.ಮೀ. ರಸ್ತೆಗಳನ್ನು ಪರಿವರ್ತಿಸಲು ಯಾವಾಗ ಕ್ರಮ ಕೈಗೊಳ್ಳಲಾಗುವುದು?

ಇ) ಮೈಸೂರು - ಬೆಂಗಳೂರು ಮಾರ್ಗ ಕನಕಪುರ ರಸ್ತೆಯಲ್ಲಿ ರಾಜ್ಯ ಹೆದ್ದಾರಿಯಾಗಿದ್ದು, ನಂಜಾಪುರದಿಂದ ಶ್ರೀರಂಗ ರಾಜಪುರದವರೆಗೆ ರಸ್ತೆ ತುಂಬಾ ಹಾಳಾಗಿರುವುದರಿಂದ ವಾಹನಗಳು ಓಡಾಡಲು ತೊಂದರೆಯಾಗಿದ್ದು, ಸರ್ಕಾರದ ಗಮನಕ್ಕೆ ಬಂದಿದೆಯೇ? ಹಾಗಿದ್ದಲ್ಲಿ ಸರಿಪಡಿಸಲು ಕೈಗೊಂಡಿರುವ ಕ್ರಮಗಳೇನು?

ಶ್ರೀ ಸಿ. ಎಂ. ಉದಾಸಿ (ಲೋಕೋಪಯೋಗಿ ಸಚಿವರು) :

ಅ) ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಸಂಬಂಧಪಟ್ಟ ಗ್ರಾಮ ಪಂಚಾಯಿತಿಗಳಿಗೆ ಮಾಸಿಕ ಸಭೆಗಳಲ್ಲಿ ತಿಳುವಳಿಕೆ ನೀಡಲಾಗಿದೆ.

ಆ) ಸದ್ಯದಲ್ಲಿ ಪ್ರಸ್ತಾವನೆಯಲ್ಲಿರುವುದಿಲ್ಲ

ಇ) ಬಂದಿದೆ. ರಸ್ತೆಯ ಈ ತುಣುಕಿನಲ್ಲಿ (ನಂಜಾಪುರದಿಂದ - ಶ್ರೀರಂಗರಾಜಪುರದವರೆಗೆ) ರಸ್ತೆಯ ಅಂಚುಗಳು ಕೊರೆದು ಹೋಗಿದ್ದರಿಂದ, ಗ್ರಾವೆಲ್ ಹಾಕಿ ಎತ್ತರಿಸಿ, ಜೆಲ್ಲಿ ಬಿಚಾವಣೆ ಮಾಡಿ ದುರಸ್ತಿಗೊಳಿಸಲಾಗಿದೆ ಹಾಗೂ ರಸ್ತೆಯಲ್ಲಿ ಬಿದ್ದಿದ್ದ ಗುಂಡಿಗಳನ್ನು ಮುಚ್ಚಿ ಸುಗಮ ವಾಹನ ಸಂಚಾರಕ್ಕೆ ಅನುವು ಮಾಡಲಾಗಿದೆ. ಸದರಿ ರಸ್ತೆಯ ಇತರೆ ತುಣುಕುಗಳಲ್ಲಿಯೂ ಗುಂಡಿಗಳನ್ನು ಮುಚ್ಚಲು ಕ್ರಮ ಕೈಗೊಳ್ಳಲಾಗಿದೆ.

ಬನ್ನೂರು ಕ್ಷೇತ್ರದಲ್ಲಿ ಪಶುವೈದ್ಯ ಆಸ್ಪತ್ರೆಗಳನ್ನು ಮೇಲ್ದರ್ಜೆಗೇರಿಸುವುದು

180 (234) ಶ್ರೀ ಎನ್, ಕೃಷ್ಣಪ್ಪ (ಬನ್ನೂರು) : ಮಾನ್ಯ ಪಶುಸಂಗೋಪನಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ

ಅ) ಬನ್ನೂರು ಕ್ಷೇತ್ರದ ಬನ್ನೂರು ತಲಕಾಡು (ಪಶುವೈದ್ಯ) ಆಸ್ಪತ್ರೆಗಳನ್ನು ಮೇಲ್ದರ್ಜೆಗೇರಿಸುವ ವಿಚಾರ ಸರ್ಕಾರದ ಪರಿಶೀಲನೆಯಲ್ಲಿದಯೇ;

ಆ) ಹಾಗಿದ್ದಲ್ಲಿ ಯಾವಾಗ ಮೇಲ್ದರ್ಜೆಗೆ ಏರಿಸಲಾಗುವುದು?

ಶ್ರೀ ಬಿ. ಬಿ. ನಿಂಗಯ್ಯ (ಪಶುಸಂಗೋಪನಾ ರಾಜ್ಯ ಸಿಚವರು) :

ಅ) ಇಲ್ಲ

ಆ) ಉದ್ಭವಿಸುವುದಿಲ್ಲ